# ‘ನಿಯಮಿತ ರಕ್ತದಾನ, ಆರೋಗ್ಯಕ್ಕೆ ವರದಾನ’

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ‘ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲ. ಮಾನವೀಯ ದೃಷ್ಟಿಯಿಂದ ಪ್ರತಿಯೊಬ್ಬರೂ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು’ ಎಂದು ದಿ ಆಕ್ಸ್‌ಫರ್ಡ್ ವಿಜ್ಞಾನ ಕಾಲೇಜಿನ ಪ್ರಾಚಾರ್ಯರಾದ ಡಾ. ಆರ್. ಕಾವ್ಯಶ್ರೀ ಹೇಳಿದರು.

ಕಾಲೇಜಿನ ಎನ್‌ಎಸ್‌ಎಸ್ ಘಟಕ, ದಿ ಆಕ್ಸ್‌ಫರ್ಡ್ ಆಸ್ಪತ್ರೆ ಹಾಗೂ ನಾರಾಯಣ ಹೃದಯಾಲಯದ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ರಕ್ತದಾನ ಶಿಬಿರದಲ್ಲಿ ಮಾತನಾಡಿದ ಅವರು, ‘ರಕ್ತದಾನ ಮಹಾದಾನ. ನಿಯಮಿತವಾಗಿ ರಕ್ತದಾನ ಮಾಡುವುದರಿಂದ ನಮ್ಮ ಆರೋಗ್ಯ ವೃದ್ಧಿಯಾಗುವುದರ ಜೊತೆಗೆ ಬೇರೆಯವರ ಜೀವವನ್ನೂ ಉಳಿಸಬಹುದು’ ಎಂದು ಹೇಳಿದರು.

ಎನ್.ಎಸ್.ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಎನ್. ಮರಿಸ್ವಾಮಿ. ಡಾ. ಗಿರೀಶ್ ಸಿ.ಜೆ ಮತ್ತು ಎನ್‌ಎಸ್‌ಎಸ್ ಸ್ವಯಂ ಸೇವಕರು ಭಾಗಿಯಾಗಿದ್ದರು.

# ‘ನಿಯಮಿತ ರಕ್ತದಾನ, ಆರೋಗ್ಯಕ್ಕೆ ವರದಾನ’




**ಬೆಂಗಳೂರು:** ರಕ್ತದಾನ ಮಹಾದಾನ, ನಿಯಮಿತ ರಕ್ತದಾನ ಮಾಡುವುದರಿಂದ ನಮ್ಮ ಆರೋಗ್ಯದ ವೃದ್ಧಿಯ ಜೊತೆಗೆ ಮೂವ್ವರ ಜೀವವನ್ನು ಉಳಿಸಬಹುದು. ಕೋವಿಡ್-19ನ ವಿಷಮ ಪರಿಸ್ಥಿತಿಯಲ್ಲಿ ರಕ್ತದಾನಿಗಳ ಸಂಖ್ಯೆ ಕ್ಷೀಣಿಸುತ್ತಿದೆ. ಶಸ್ತ್ರಚಿಕಿತ್ಸೆಗೆ ಒಳಗಾಗಬೇಕಾಗಿರುವ ಎಷ್ಟೋ ರೋಗಿಗಳು ರಕ್ತದ ಕೊರತೆಯಿಂದ ಬಳಲುವಂತಾಗಿದೆ. ಇಂತಹ ಸಂದರ್ಭದಲ್ಲಿ ರಕ್ತದಾನ ಮಾಡುವವರೆ ನಿಜವಾದ ಹೀರೋಗಳು. ನೀವು ನೀಡುವ ಒಂದೊಂದು ಹನಿ ರಕ್ತವು ಮೌಲ್ಯಾದಾರಿತವಾದುದ್ದು. ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲದಿರುವುದರಿಂದ, ಮಾನವೀಯ ದೃಷ್ಟಿಯಿಂದ ಪ್ರತಿಯೊಬ್ಬರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಪ್ರಾಂಶುಪಾಲೆ ಡಾ. ಆರ್. ಕಾವ್ಯಶ್ರೀ ರವರು ಕರೆ ನೀಡಿದರು.

ದಿ ಆಕ್ಸ್ ಫರ್ಡ್ ವಿಜ್ಞಾನ ಕಾಲೇಜಿನ ರಾಷ್ಟೀಯಾ ಸೇವಾ ಯೋಜನೆ ಘಟಕ, ದಿ ಆಕ್ಸ್ ಫರ್ಡ್ ಆಸ್ಪತ್ರೆ ಮತ್ತು ನಾರಾಯಣ ಹೃದಯಾಲಯದ ಸಹಯೋಗದೊಂದಿಗೆ ಆಯೋಜಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ವೈದ್ಯಕೀಯ ಮಾರ್ಗಸೂಚಿಯಂತೆ ನೋಂದಾಯಿಸಿಕೊಂಡ ದಾನಿಗಳಿಂದ ಕಕಇ ಕಿಟ್ ಬಳಸಿಕೊಂಡು ಸುರಕ್ಷಿತವಾಗಿ ರಕ್ತವನ್ನು ಸಂಗ್ರಹಿಸಲಾಯಿತು. ಕಾರ್ಯಕ್ರಮದ ಆಯೋಜಕರಾದ ಎನ್.ಎಸ್.ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಮರಿಸ್ವಾಮಿ ಎನ್. ಶಿಬಿರದ ಮುಖ್ಯ ಅತಿಥಿಗಳಾದ ಡಾ. ಗಿರೀಶ್ ಸಿ.ಜೆ ಮತ್ತು ಎನ್.ಎಸ್.ಎಸ್ ಸ್ವಯಂ ಸೇವಕರು ಭಾಗಿಯಾಗಿದ್ದರು.

# ಪ್ಲಾಸ್ಟಿಕ್ ಬಳಕೆ ತಡೆಗೆ ಅಭಿಯಾನ



**ಬನ್ನೇರುಘಟ್ಟದಲ್ಲಿ ಪ್ಲಾಸ್ಟಿಕ್ ನಿರ್ಮೂಲನೆಯ ಜಾಗೃತಿ ಮತ್ತು ಪ್ಲಾಸ್ಟಿಕ್ ಸಂಗ್ರಹ ಕಾರ್ಯಕ್ಕೆ ವಲಯ ಅರಣ್ಯ ಅಧಿಕಾರಿ ಗಣೇಶ್ ಚಾಲನೆ ನೀಡಿದರು**

**ಸಂ.ಕ. ಸಮಾಚಾರ ಆನೇಕಲ್**

ಆಧುನಿಕತೆ ಪರಿಣಾಮವಾಗಿ ಪ್ಲಾಸ್ಟಿಕ್ಕನ್ನು ಅತಿಹೆಚ್ಚು ಬಳಕೆ ಮಾಡಲಾಗುತ್ತಿದೆ. ಇದರಿಂದ ಪರಿಸರ ಮಾಲಿನ್ಯ ಉಂಟಾಗುತ್ತದೆ. ವನ್ಯಜೀವಿಗಳ ಮೇಲೂ ಸಹ ದುಷ್ಪರಿಣಾಮಗಳು ಉಂಟಾಗುತ್ತಿವೆ. ಹಾಗಾಗಿ ಪ್ಲಾಸ್ಟಿಕ್ ಬಳಕೆಯನ್ನು ತಡೆಯುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಬೇಕು ಎಂದು ವಲಯ ಅರಣ್ಯಾಧಿಕಾರಿ ಗಣೇಶ್ ತಿಳಿಸಿದರು.

ಅವರು ತಾಲೂಕಿನ ಬನ್ನೇರುಘಟ್ಟದಲ್ಲಿ ಪ್ಲಾಸ್ಟಿಕ್ ನಿರ್ಮೂಲನೆಯ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಅರಣ್ಯ ಪ್ರದೇಶದಲ್ಲಿ ಪ್ಲಾಸ್ಟಿಕ್‌ನ್ನು ಎಸೆದು ಹೋಗುವುದರಿಂದ ಪ್ರಾಣಿಗಳು ಪ್ಲಾಸ್ಟಿಕ್ ತಿಂದು ಪ್ರಾಣ ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ವ್ಯಾಪ್ತಿಯನ್ನು ಪ್ಲಾಸ್ಟಿಕ್ ಮುಕ್ತ ಮಾಡುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಬೆಂಗಳೂರಿನ ವಿವಿಧ ಸಂಘಸಂಸ್ಥೆಗಳಿಂದ ಆಗಮಿಸಿದ್ದ 60ಕ್ಕೂ ಹೆಚ್ಚು ಸ್ವಯಂಸೇವಕರು ಅರಣ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ಅರಣ್ಯ ದಂಚಿನಲ್ಲಿ ಸಂಗ್ರಹಿಸಿದ ಪ್ಲಾಸ್ಟಿಕ್‌ನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಯಿತು.

# ಮಾನವನ ಅತಿರೇಕದಿಂದ ಪರಿಸರಕ್ಕೆ ಹಾನಿ

VK. 22-02

**ಬೆಂಗಳೂರು:** ಮಾನವನ ಅತಿರೇಕದ ವರ್ತನೆಯಿಂದ ಪರಿಸರಕ್ಕೆ ಹಾನಿಯುಂಟಾಗುತ್ತಿದೆ ಎಂದು ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿ ಎ.ಗಣೇಶ್ ಹೇಳಿದರು.

ಭಾನುವಾರ ದಿ ಆಕ್ಸ್‌ಫರ್ಡ್ ವಿಜ್ಞಾನ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕ, ಬನ್ನೇರುಘಟ್ಟ ವನ್ಯಜೀವಿ ವಲಯ ಜಂಟಿಯಾಗಿ ಆಯೋಜಿಸಿದ್ದ ಸ್ವಚ್ಛ ಭಾರತ್ ಅಭಿಯಾನ್ ಕಾರ್ಯಕ್ರಮವನ್ನು ಉದ್ಘಾಟಿಸಿಮಾತನಾಡಿದರು. ಮಿತಿಮೀರಿದ ಪ್ಲಾಸ್ಟಿಕ್ ತ್ಯಾಜ್ಯದ ಉತ್ಪಾದನೆ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಲ್ಲದೆ ಅನಾವೃಷ್ಟಿ, ಅಂತರ್ಜಲದ ಕ್ಷೀಣತೆ, ಪ್ರಾಣಿ ಸಂಕುಲಕ್ಕೆ ಮಾರಕವಾಗಿದೆ. ಹೀಗಾಗಿ ಪ್ಲಾಸ್ಟಿಕ್ ಬಳಕೆಯನ್ನು ಮಿತಿಗೊಳಿಸಿ, ಆರೋಗ್ಯಕರ ಪರಿಸರ ನಿರ್ಮಾಣ ಕಾರ್ಯದಲ್ಲಿ ಸ್ವಯಂಸೇವಕರ ಪಾತ್ರ ಬಹುಮುಖ್ಯ ಎಂದರು. ಇದೇ ವೇಳೆ ವನ್ಯಜೀವಿ ವಲಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ಲಾಸ್ಟಿಕ್ ತೆರವುಗೊಳಿಸಲಾಯಿತು. ಕಾಲೇಜಿನ ಪ್ರಾಂಶುಪಾಲ ಡಾ.ಆರ್. ಕಾವ್ಯಶ್ರೀ, ಮರಿಸ್ವಾಮಿ. ಎನ್, ಅರಣ್ಯ ಸಂರಕ್ಷಕರು ಹಾಗೂ ಎನ್‌ಎಸ್‌ಎಸ್ ಘಟಕದ ಸ್ವಯಂಸೇವಕರು ಹಾಜರಿದ್ದರು.

/VishwavaniNews epaper.vishwavani.news/ vishwavani.news
ಬೆಂಗಳೂರು • ಮಂಗಳೂರು • ಕಲಬುರಗಿ • ಬೆಳಗಾವಿ • ಹುಬ್ಬಳ್ಳಿ • ದಾವಣಗೆರೆ
ವಿಶ್ವವಾಣಿ
ವಿಶ್ವಾಸವೇ ವಿಶ್ವ

ಬಂದಿರುವುದು ಸಂತಸದ ಬೆಳವಣಿಗೆ. ಗ್ರಾಮೀಣ ಭಾಗದ ಶಿಕ್ಷಕರ ಸಮಸ್ಯೆಗಳಿಗೆ ಬೆನ್ನೆಲುಬಾಗಿ ನಿಲ್ಲುವ ಜತೆಗೆ ಗ್ರಾಮೀಣ ಶಾಲೆಗಳ ಬೆಳವಣಿಗೆಗೆ ಶ್ರಮಿಸಿ ಗ್ರಾಮೀಣ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ

ಆರುವಯ್ಯಾ, ಎಂ.ಎಸ್. ರತ್ನಮ್ಮ, ಶೈಲಜಾ, ಎಚ್. ರಾಮಚಂದ್ರಯ್ಯ, ಎಂ.ಕೆ. ಪಾರ್ವತಮ್ಮ ಪ್ರತಿನಿಧಿಗಳಿಗೆ ನೇಮಕಾತಿ ಪತ್ರ ಹಸ್ತಾಂತರಿಸಲಾಯಿತು.

ರಾಮಂಜುನಪ್ಪ, ಪ್ರಾಶಾಶಿ ಸಂಘದ ಮಾಜಿ ಅಧ್ಯಕ್ಷ ಜಿ.ವಿ.ಕುಮಾರ್, ಪರಮೇಶಯ್ಯ, ಬಿ. ಶಿವಕುಮಾರ್, ಎನ್. ನಾಗರಾಜು, ಲಕ್ಷ್ಮಣ ತೀರ್ಥ ಸೇರಿ ಹಲವರು ಉಪಸ್ಥಿತರಿದ್ದರು.

# ಮಾನವನ ಅತಿರೇಕ, ಪ್ಲಾಸ್ಟಿಕ್ ಬಳಕೆ ಪರಿಸರಕ್ಕೆ ಹಾನಿ

**ಬೆಂಗಳೂರು:** ಮಾನವನ ಅತಿರೇಕ, ಪರಿಸರಕ್ಕೆ ಹಾನಿ, ಮಿತಿಮೀರಿದ ಪ್ಲಾಸ್ಟಿಕ್‌ಬಳಕೆ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಲ್ಲದೆ ಅನಾವೃಷ್ಟಿ, ಅಂತರ್‌ಜಲದ ಕ್ಷೀಣತೆ, ಪ್ರಾಣಿ ಸಂಕುಲಕ್ಕೆ ಮಾರಕವಾಗಿದೆ ಎಂದು ವಲಯ ಅರಣ್ಯಾಧಿಕಾರಿ ವಿ. ಗಣೇಶ್ ಆತಂಕ ವ್ಯಕ್ತಪಡಿಸಿದರು.

ವಲಯ ಅರಣ್ಯಾಧಿಕಾರಿ ವಿ. ಗಣೇಶ್ ಆತಂಕ

ಸ್ವಚ್ಛ ಭಾರತ್ ಅಭಿಯಾನ

ದಿ ಆಕ್ಸ್ ಫರ್ಡ್ ವಿಜ್ಞಾನ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಬನ್ನೇರುಘಟ್ಟ ವನ್ಯಜೀವಿ ವಲಯದ ಸಹಯೋಗದೊಂದಿಗೆ, ಬನ್ನೇರುಘಟ್ಟ ವನ್ಯಜೀವಿ ವಲಯ, ಕಲ್ಕೆರೆ, ಬೆಂಗಳೂರು ಕೇಂದ್ರದಲ್ಲಿ ಆಯೋಜಿಸಿದ್ದ ಸ್ವಚ್ಛ ಭಾರತ್ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಾನವನ ಅತಿ ಆಸೆಯಿಂದ ಪರಿಸರ ಹಾಳಾಗುತ್ತಿದೆ. ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿದ್ದು, ಅದನ್ನು ಸಿಕ್ಕಸಿಕ್ಕ ಕಡೆಗಳಲ್ಲಿ ಬಿಸಾಡುವ ಪ್ರವೃತ್ತಿ ಹೆಚ್ಚುತ್ತಿದೆ. ಇದನ್ನು ಮಿತಿಗೊಳಿಸಿ, ಜಾಗೃತಿ ಮೂಡಿಸುವುದು ಮತ್ತು ಆರೋಗ್ಯಕರ ಪರಿಸರ ನಿರ್ಮಾಣ ಕಾರ್ಯದಲ್ಲಿ ಸ್ವಯಂ ಸೇವಕರ ಪಾತ್ರ ಬಹುಮುಖ್ಯವಾದದ್ದು ಎಂದರು.

ವನ್ಯಜೀವಿ ವಲಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ಲಾಸ್ಟಿಕ್ ತೆರವುಗೊಳಿಸಲಾಯಿತು. ಪ್ರಾಂಶುಪಾಲ ಡಾ. ಆರ್. ಕಾವ್ಯಶ್ರೀ, ಕಾರ್ಯಕ್ರಮಾಧಿಕಾರಿ ಮರಿಸ್ವಾಮಿ ಎನ್, ಅರಣ್ಯ ಸಂರಕ್ಷಕರು ಮತ್ತು ಸಿಬ್ಬಂದಿ ವರ್ಗ ಹಾಗೂ ಎನ್‌ಎಸ್‌ಎಸ್ ಸ್ವಯಂ ಸೇವಕರು ಇದ್ದರು.



ಸ್ವಚ್ಛ ಭಾರತ್ ಅಭಿಯಾನ ಕಾರ್ಯಕ್ರಮದಲ್ಲಿ ವಲಯ ಅರಣ್ಯಾಧಿಕಾರಿ ವಿ. ಗಣೇಶ್ ಮತ್ತು ಸಿಬ್ಬಂದಿ, ದಿ ಆಕ್ಸ್ ಫರ್ಡ್ ವಿಜ್ಞಾನ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸ್ವಯಂಸೇವಕರು ಭಾಗವಹಿಸಿ ಪ್ಲಾಸ್ಟಿಕ್ ತೆರವುಗೊಳಿಸಿದರು.